**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆ ಚುನಾವಣಾ ಕ್ಷೇತ್ರ) ಇವರು ನಿಯಮ-72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

* * * * * *

**ವಿಷಯ:** ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವ ಕೆಲವು ಅತಿಥಿ ಉಪನ್ಯಾಸಕರ ಪದವಿ ಪ್ರಮಾಣಪತ್ರಗಳು ನಕಲಿ ಹಾಗೂ ಅವುಗಳ ನೈಜತೆಯನ್ನು ದೃಢೀಕರಿಸಿರುವ ದಾಖಲೆಗಳೂ ಕೂಡ ನಕಲಿ ಎನ್ನುವ ವರದಿ ಅತ್ಯಂತ ಕಳವಳಕಾರಿಯಾಗಿದೆ.

ಉನ್ನತ ಶಿಕ್ಷಣದಲ್ಲಿ ನಕಲಿ ಹಾವಳಿ ತಡೆಯುವುದು, ನಕಲಿ ಪ್ರಮಾಣಪತ್ರ ಮಾರಾಟ ಹಾಗೂ ವಿತರಣೆ ದಂಧೆಯನ್ನು ಶಾಶ್ವತವಾಗಿ ಕೊನೆಗೊಳಿಸುವುದು ಹಾಗೂ ಅವುಗಳನ್ನು ಬಳಸಿಕೊಂಡು ಸರ್ಕಾರಿ ಹಾಗೂ ಖಾಸಗಿ ವಲಯದಲ್ಲಿ ಈಗಾಗಲೇ ಅಕ್ರಮವಾಗಿ ಉದ್ಯೋಗ ಪಡೆದಿರುವವರ ವಿರುದ್ಧ ಅತ್ಯಂತ ಕಠಿಣ ಕಾನೂನು ಕ್ರಮ ಜರುಗಿಸಲು ಸರ್ಕಾರ ಇದುವರೆಗೆ ಯಾವುದೇ ಸೂಕ್ತ ಹಾಗೂ ಅಗತ್ಯ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ಆಯ್ಕೆಯಾಗುವ ಕೆಲವು ಅಭ್ಯರ್ಥಿಗಳು ನಕಲಿ ದಾಖಲೆಗಳನ್ನು ಸಲ್ಲಿಸುತ್ತಿರುವುದಾಗಿ ದೂರುಗಳು ಸ್ವೀಕೃತವಾಗುತ್ತಿದ್ದ ಹಿನ್ನೆಲೆಯಲ್ಲಿ, ಕರ್ತವ್ಯಕ್ಕೆ ಹಾಜರಾಗುವ ಅತಿಥಿ ಉಪನ್ಯಾಸಕ ಅಭ್ಯರ್ಥಿಗಳ ಸ್ನಾತಕೋತ್ತರ ಪದವಿ, ಎನ್‌ಇಟಿ, ಎಸ್‌ಎಲ್‌ಇಟಿ, ಕೆ-ಎಸ್‌ಇಟಿ, ಪಿಹೆಚ್.ಡಿ, ಎಂ.ಫಿಲ್ ಅಂಕಪಟ್ಟಿ/ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಂಬಂಧಪಟ್ಟ ವಿಶ್ವವಿದ್ಯಾಲಯದಿಂದ ಒಂದು ಬಾರಿಯ ಕ್ರಮವಾಗಿ ನೈಜತೆ ವರದಿಯನ್ನು ಪಡೆಯುವಂತೆ, ಒಂದು ವೇಳೆ ಸ್ನಾತಕೋತ್ತರ ಪದವಿ, ಎನ್‌ಇಟಿ, ಎಸ್‌ಎಲ್‌ಇಟಿ, ಕೆ-ಎಸ್‌ಇಟಿ, ಪಿಹೆಚ್.ಡಿ, ಎಂ.ಫಿಲ್ ಅಂಕಪಟ್ಟಿ/ಪ್ರಮಾಣ ಪತ್ರಗಳ ಕುರಿತು ಸಂಬಂಧಪಟ್ಟ ವಿಶ್ವವಿದ್ಯಾಲಯದಿಂದ 'ನಕಲಿ'/'FAKE' ಎಂಬುದಾಗಿ ವರದಿ ಸ್ವೀಕೃತವಾದಲ್ಲಿ ಅಂತಹ ಅತಿಥಿ ಉಪನ್ಯಾಸಕರನ್ನು ಕೂಡಲೇ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಅಂತಹ ಅತಿಥಿ ಉಪನ್ಯಾಸಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳಿಗೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಕಾಶಿಇ/ನೇವಿ-1/ಅಉಅ/28/2025-26, ದಿನಾಂಕ:30.09.2025ರಲ್ಲಿ ಸೂಚಿಸಲಾಗಿರುತ್ತದೆ.

**ಸಂಖ್ಯೆ: ಇಡಿ 441 ಡಿಸಿಇ 2025(ಇ)**

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು